**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 46 ಜೈಅಯೋ 2012(ಪಿ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, **ದಿನಾಂಕ 18.03.2013**

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

**ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,**

ಮಾನ್ಯರೇ,

ವಿಷಯ: 2009-10 ಮತ್ತು 2010-11ನೇ ಸಾಲುಗಳಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಬಿಡುಗಡೆ ಮಾಡಿದ ಅನುದಾನವನ್ನು ಸಹಾಯಧನ ಪಾವತಿಸದೇ ಉಳಿಕೆ ಇರಿಸಿಕೊಂಡಿರುವ ಕುರಿತು

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ ಗ್ರಾಅಪ 46 ಜೈಅಯೋ 2012(ಪಿ) ದಿನಾಂಕ 01.03.2013.
2. ಮಹಾಲೇಖಪಾಲರ ಆಡಿಟ್ ಆಕ್ಷೇಪಣೆ ಸಂಖ್ಯೆ: 06 ದಿನಾಂಕ 21.01.2013

ಉಲ್ಲೇಖಿತ (1)ರ ಪತ್ರದಲ್ಲಿ ಮಹಾಲೇಖಪಾಲರ ಆಡಿಟ್ ಆಕ್ಷೇಪಣೆ ಸಂಖ್ಯೆ: 06 ರಲ್ಲಿ 2009-10 ಮತ್ತು 2010-11ನೇ ಸಾಲುಗಳಿಗೆ ಸಂಬಂಧಿಸಿದಂತೆ ಕಾರ್ಯಕ್ರಮದಡಿ ಸಹಾಯಧನ ಬಿಡುಗಡೆ ಮಾಡಿದ್ದು, ಈ ಪೈಕಿ ಬಹುತೇಕ ಜಿಲ್ಲಾ ಪಂಚಾಯತ್‌ಗಳು ಅನುದಾನವನ್ನು ವಿನಿಯೋಗಿಸದೇ ಬಹಳಷ್ಟು ಅನುದಾನವನ್ನು ಬಾಕಿ ಉಳಿಸಿಕೊಳ್ಳಲಾಗಿದೆ ಎಂದು ಆಕ್ಷೇಪಿಸಿದ್ದು, ಸದರಿ ಆಕ್ಷೇಪಣೆಗಳನ್ನು ಪರಿಶೀಲಿಸಿ ಸ್ಪಷ್ಟ ಮಾಹಿತಿಯನ್ನು ಮರು ಫ್ಯಾಕ್ಸ್‌ನಲ್ಲಿ (080-22371206) ಕೂಡಲೇ ನೀಡುವಂತೆ ಕೋರಲಾಗಿದ್ದರೂ ಸಹ ಇದುವರೆವಿಗೂ ನೀಡಿರುವುದಿಲ್ಲ. ಇದರಿಂದಾಗಿ 2009-10 ಮತ್ತು 2010-11ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬರಬೇಕಾದ ಬಾಕಿ ಸಹಾಯಧನವನ್ನು ಪಡೆಯಲು ಸಾಧ್ಯವಾಗಿರುವುದಿಲ್ಲ. ಇದರಿಂದಾಗಿ ಕಾರ್ಯಕ್ರಮದ ಅನುಷ್ಠಾನಕ್ಕೆ ಧಕ್ಕೆಯುಂಟಾಗುತ್ತಿದೆ. ಆದ್ದರಿಂದ ಕಾರ್ಯಕ್ರಮದ ಹಿತದೃಷ್ಟಿಯಿಂದ ಕೂಡಲೇ ಈ ಬಗ್ಗೆ ವೈಯಕ್ತಿಕ ಗಮನಹರಿಸಿ, ಆಕ್ಷೇಪಣೆಗಳಿಗೆ ಸ್ಪಷ್ಟೀಕರಣವನ್ನು ತುರ್ತಾಗಿ ನೀಡುವಂತೆ ಕೋರಿದೆ.

ತಮ್ಮ ವಿಶ್ವಾಸಿ,

19/3/13

(ಎಂ.ದೀಪಾ)
ನಿರ್ದೇಶಕರು(ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.